**Akashvani : Bangalore**
**Regional Bulletin In Kannada**
**19.01.2026 / 14.30 hrs**

ಆಕಾಶವಾಣಿ ಬೆಂಗಳೂರು

ಪ್ರದೇಶ ಸಮಾಚಾರ

**19.01.2026 / 14.30 hrs**

**<><*<><>*><>**

<u>ಮುಖ್ಯಾಂಶಗಳು</u>

**೧. ಲಕ್ಕುಂಡಿಯಲ್ಲಿ ನಾಲ್ಕನೇ ದಿನಕ್ಕೆ ಕಾಲಿಟ್ಟ ಉತ್ಖನನ ಕಾರ್ಯ; ಕಲ್ಲಿನ ಆಯುಧ ಪತ್ತೆ**

**೨. ಸ್ವಿಡ್ಜರ್‌ಲ್ಯಾಂಡ್‌ನ ದಾವೋಸ್‌ನಲ್ಲಿ ಇಂದಿನಿಂದ ನಡೆಯಲಿರುವ ವಿಶ್ವ ಆರ್ಥಿಕ ವೇದಿಕೆಯಲ್ಲಿ ಸಚಿವ ಎಂ.ಬಿ.ಪಾಟೀಲ್ ನೇತೃತ್ವದ ರಾಜ್ಯದ ನಿಯೋಗ ಭಾಗಿ**

**೩. ಸಿಎಸ್‌ಐಎಫ್ ವಂದೇ ಮಾತರಂ ಕರಾವಳಿ ಸೈಕ್ಲೋಥಾನ್‌ಗೆ ಇದೇ ೨೮ ರಂದು ಚಾಲನೆ**

**೪. ರಾಜ್ಯಕ್ಕೆ ನಾಡಿದ್ದು ಉಪರಾಷ್ಟ್ರಪತಿ ಸಿ.ಪಿ.ರಾಧಾಕೃಷ್ಣನ್ ಭೇಟಿ; ವಿವಿಧ ಕಾರ್ಯಕ್ರಮಗಳಲ್ಲಿ ಭಾಗಿ**

**<><*<><>*><>**

ಗದಗ ಜಿಲ್ಲೆಯ ಲಕ್ಕುಂಡಿ ಗ್ರಾಮದಲ್ಲಿ ನಡೆಯುತ್ತಿರುವ ಉತ್ಖನನ ಕಾರ್ಯ ನಾಲ್ಕನೇ ದಿನಕ್ಕೆ ಕಾಲಿಟ್ಟಿದೆ. ಲಕ್ಕುಂಡಿ ಗ್ರಾಮದ ಕೋಟೆ ವೀರಭದ್ರೇಶ್ವರ ದೇವಸ್ಥಾನದ ಬಳಿ ಪ್ರಾರಂಭವಾದ ಉತ್ಖನನ ಕಾರ್ಯದಲ್ಲಿ ಇಂದು ಕೊಡಲಿಯನ್ನು ಹೋಲುವ ಗುಂಡಾಕಾರದ ಕಲ್ಲಿನ ಆಯುಧ ಪತ್ತೆಯಾಗಿದೆ. ಉತ್ಖನನ ಕಾರ್ಯದ ಮೊದಲ ದಿನ ಶಿವಲಿಂಗದ ಪಾಣೀಪೀಠ, ಎರಡನೇ ದಿನ ಉತ್ಖನನ ಕಾರ್ಯದಲ್ಲಿ ಪುರಾತನ ಕಾಲದ ಮಣ್ಣಿನ ಮಡಿಕೆ ಚೂರುಗಳು, ಮೂರನೇ ದಿನ ಸಣ್ಣ ಪ್ರಮಾಣದ ಶಿವಲಿಂಗ ಮತ್ತು ಕೋಟೆ ಗೋಡೆಯ ಕುರುಹುಗಳು ಪತ್ತೆಯಾಗಿದ್ದವು. ಪತ್ತೆಯಾದ ವಸ್ತುಗಳನ್ನು ಭಾರತೀಯ ಪುರಾತತ್ವ ಸರ್ವೇಕ್ಷಣಾ ಇಲಾಖೆಯ ವತಿಯಿಂದ ಸಂರಕ್ಷಿಸಲಾಗಿದೆ. ಲಕ್ಕುಂಡಿಯ ಗ್ರಾಮದಲ್ಲಿ ಇಲ್ಲಿಯವರೆಗೆ ಮೂರು ಅಡಿಗಳಷ್ಟು ಉತ್ಖನನ ಕಾರ್ಯ ಪೂರ್ಣಗೊಂಡಿದೆ. ಇನ್ನು ಮೂರರಿಂದ ನಾಲ್ಕು ಅಡಿಗಳ ಉತ್ಖನನ ನಂತರ ಬಹಳಷ್ಟು ಪುರಾತನ ವಸ್ತುಗಳು ದೊರೆಯುವ ಸಾಧ್ಯತೆ ಹೆಚ್ಚಿದೆ ಎಂದು ಪುರಾತತ್ವ ಇಲಾಖೆಯ ಅಧಿಕಾರಿಗಳು ತಿಳಿಸಿದ್ದಾರೆ.

**<><*<><>*><>**

ಸ್ವಿಡ್ಜರ್‌ಲ್ಯಾಂಡ್‌ನ ದಾವೋಸ್‌ನಲ್ಲಿ ಇಂದಿನಿಂದ ಇದೇ ೨೩ರವರೆಗೆ ನಡೆಯಲಿರುವ ವಿಶ್ವ ಆರ್ಥಿಕ ವೇದಿಕೆಯಲ್ಲಿ ರಾಜ್ಯ ಕೈಗಾರಿಕಾ ಇಲಾಖೆಯ ಉನ್ನತ ಮಟ್ಟದ ನಿಯೋಗದೊಂದಿಗೆ ಬೃಹತ್ ಮತ್ತು ಮಧ್ಯಮ ಕೈಗಾರಿಕಾ ಸಚಿವ ಎಂ.ಬಿ.ಪಾಟೀಲ್ ಪಾಲ್ಗೊಳ್ಳಲಿದ್ದಾರೆ. 'ಕಾರ್ಯಗತಗೊಳಿಸುವಿಕೆಗೆ ಆದ್ಯತೆ' ಎಂಬ ಸ್ಪಷ್ಟ ದೃಷ್ಟಿಕೋನದೊಂದಿಗೆ, ಈ ನಿಯೋಗವು ಂoWS, ಐeಟಿovo, ಅಂಥಿಚಿ-ಅಂಟಚಿ ಸೇರಿದಂತೆ ಜಾಗತಿಕ ದಿಗ್ಗಜ ಕಂಪನಿಗಳೊಂದಿಗೆ ೪೫ಕ್ಕೂ ಹೆಚ್ಚು ಉನ್ನತ ಮಟ್ಟದ ಸಭೆಗಳನ್ನು ನಡೆಸಲಿದೆ. ಈ ಸಭೆಗಳ ಮೂಲಕ ಮುಂಬರುವ ಹೂಡಿಕೆ ಅವಕಾಶಗಳನ್ನು ಕೇವಲ ಘೋಷಣೆಗಳಾಗಿಯೇ ಉಳಿಸದೆ, ಅವನ್ನು ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸಿ, ರಾಜ್ಯದಲ್ಲಿ ಉದ್ಯೋಗಾವಕಾಶಗಳನ್ನು ಸೃಷ್ಟಿಸುವುದೇ ಪ್ರಮುಖ ಗುರಿಯಾಗಿದೆ ಎಂದು ಸಾಮಾಜಿಕ ಜಾಲತಾಣದಲ್ಲಿ ಸಚಿವ ಎಂ.ಬಿ.ಪಾಟೀಲ್ ಹೇಳಿದ್ದಾರೆ.

**<><*<><>*><>**

ಕೇಂದ್ರೀಯ ಕೈಗಾರಿಕಾ ಭದ್ರತಾಪಡೆ-ಸಿಐಎಸ್‌ಎಫ್ ಎರಡನೇ ಆವೃತ್ತಿಯ 'ಸಿಐಎಸ್‌ಎಫ್ ವಂದೇ ಮಾತರಂ ಕರಾವಳಿ ಸೈಕ್ಲೋಥಾನ್-೨೦೨೬' ಆಯೋಜಿಸಿದೆ. ಇದೇ ೨೮ ರಿಂದ ಫೆಬ್ರವರಿ ೨೨ರವರೆಗೆ ಈ ಸೈಕ್ಲೋಥಾನ್ ನಡೆಯಲಿದೆ. ಸೈಕ್ಲೋಥಾನ್‌ಗೆ ಇದೇ ೨೮ ರಂದು ವರ್ಚುಯಲ್ ಮೂಲಕ ಕೇಂದ್ರ ಗೃಹ ಖಾತೆ ರಾಜ್ಯ ಸಚಿವ ನಿತ್ಯಾನಂದ ರೈ ಚಾಲನೆ ನೀಡಲಿದ್ದಾರೆ. ಸಿಐಎಸ್‌ಎಫ್ ಅಧಿಕಾರಿಗಳು ಮತ್ತು ಸಿಬ್ಬಂದಿ ಒಳಗೊಂಡ ಎರಡು ಪ್ರತ್ಯೇಕ ತಂಡಗಳು ನವದೆಹಲಿಯ ಮೇಜರ್ ಧ್ಯಾನ್‌ಚಂದ್ ರಾಷ್ಟ್ರೀಯ ಕ್ರೀಡಾಂಗಣದಿಂದ ಸೈಕ್ಲೋಥಾನ್ ಆರಂಭಿಸಲಿದೆ. ೨೫ ದಿನಗಳ ಈ ಸೈಕ್ಲೋಥಾನ್‌ನಲ್ಲಿ ೬ ಸಾವಿರದ ೫೫೩ ಕಿಲೋಮೀಟರ್‌ಗಳನ್ನು ಸೈಕಲ್ ಮೂಲಕ ಕ್ರಮಿಸಲಾಗುತ್ತದೆ. ಇದು ಭಾರತದ ಇಡೀ ಕರಾವಳಿಯನ್ನು ಒಳಗೊಂಡಿದೆ. ಕರ್ನಾಟಕದ ನವ ಮಂಗಳೂರು ಬಂದರಿಗೆ ಫೆಬ್ರವರಿ ೧೮ ರಂದು ಸೈಕ್ಲೋಥಾನ್ ತಂಡ ಆಗಮಿಸಲಿದೆ. ಅಂತಿಮವಾಗಿ ಫೆಬ್ರವರಿ ೨೨ ರಂದು ಎರಡೂ ತಂಡಗಳು ಕೇರಳದ ಕೊಚ್ಚಿಯಲ್ಲಿ ಸೈಕ್ಲೋಥಾನ್ ಅಭಿಯಾನವನ್ನು ಪೂರ್ಣಗೊಳಿಸಲಿದೆ. ಈ ಕುರಿತು ಸಿಐಎಸ್‌ಎಫ್ ಪೊಲೀಸ್ ಉಪ ಮಹಾ ನಿರೀಕ್ಷಕರಾದ ಎಚ್.ಮಂಜುನಾಥ್ ಆಕಾಶವಾಣಿಗೆ ಮಾಹಿತಿ ನೀಡಿದ್ದಾರೆ.

**ಧ್ವನಿ; ಎಚ್.ಮಂಜುನಾಥ್ ( ೨೬ ಸೆಕೆಂಡ್ಸ್)**

**<><*<><>*><>**

ಸರ್ಕಾರಿ ಕಚೇರಿಗೆ ಆಗಮಿಸುವ ನಾಗರಿಕರ ಗೌರವಕ್ಕೆ ಯಾವುದೇ ರೀತಿಯ ಚ್ಯುತಿ ಬಾರದಂತೆ ಅಧಿಕಾರಿಗಳ ನಡೆ ಮತ್ತು ವರ್ತನೆ ಇರಬೇಕು ಎಂದು ಕಾನೂನು, ಸಂಸದೀಯ ವ್ಯವಹಾರಗಳು ಮತ್ತು ಪ್ರವಾಸೋದ್ಯಮ ಸಚಿವ  ಎಚ್.ಕೆ. ಪಾಟೀಲ್ ಸಲಹೆ ನೀಡಿದ್ದಾರೆ. ಗದಗ ತಾಲೂಕು

ಪ್ರಜಾಸೌಧ ಕಟ್ಟಡದ ಶಿಲಾನ್ಯಾಸ ನೆರವೇರಿಸಿ ಮಾತನಾಡಿದ ಅವರು, ಸಾರ್ವಜನಿಕ ಕೆಲಸಗಳಲ್ಲಿನ ವಿಳಂಬಕ್ಕೆ ಆಡಳಿತ ವ್ಯವಸ್ಥೆಯಲ್ಲಿನ ಲೋಪ-ದೋಷಗಳೇ ಕಾರಣ. ಅವುಗಳನ್ನು ಗುರುತಿಸಿ, ಸರಿಪಡಿಸಲು ಅಧಿಕಾರಿಗಳು ಆತ್ಮಾವಲೋಕನ ಮಾಡಿಕೊಳ್ಳಬೇಕು. ಉತ್ತಮ ಆಡಳಿತ ಸಾಧ್ಯವಾಗಬೇಕು ಎಂಬುದು ಸರ್ಕಾರದ ಇಚ್ಛಾಶಕ್ತಿಯಾಗಿದೆ ಎಂದು ಹೇಳಿದರು.

**<><*<><>*><>**

ಉಪರಾಷ್ಟ್ರಪತಿ ಸಿ.ಪಿ.ರಾಧಾಕೃಷ್ಣನ್ ಅವರು, ಇದೇ ೨೧ ರಂದು ರಾಜ್ಯಕ್ಕೆ ಭೇಟಿ ನೀಡಲಿದ್ದಾರೆ. ಭೇಟಿಯ ಸಂದರ್ಭದಲ್ಲಿ ಅವರು, ತುಮಕೂರಿನಲ್ಲಿ ನಡೆಯುವ ಶ್ರೀ ಶಿವಕುಮಾರ ಸ್ವಾಮೀಜಿಯವರ ಏಳನೇ ಪುಣ್ಯತಿಥಿ ಕಾರ್ಯಕ್ರಮದಲ್ಲಿ ಪಾಲ್ಗೊಳ್ಳಲಿದ್ದಾರೆ. ನಂತರ ಅವರು, ಬೆಂಗಳೂರಿನಲ್ಲಿ ಸಿಎಂಆರ್ ಇನ್ಸ್ಟಿಟ್ಯೂಟ್ ಆಫ್ ಟೆಕ್ನಾಲಜಿಯ ಬೆಳ್ಳಿ ಸಮಾರಂಭದಲ್ಲಿ ಭಾಗವಹಿಸಲಿದ್ದಾರೆ.

**<><*<><>*><>**

ದೇಶದ ಆರ್ಥಿಕ ಸ್ಥಿತಿ ಸದೃಢಗೊಳ್ಳಬೇಕಾದರೆ ಸಣ್ಣ ಮತ್ತು ಮಧ್ಯಮ ಕೈಗಾರಿಕೆಗಳನ್ನು ಬಲಪಡಿಸುವ ಅಗತ್ಯವಿದೆ ಎಂದು ದಾವಣಗೆರೆ ಜಿಲ್ಲಾ ಕೈಗಾರಿಕಾ ಇಲಾಖೆ ಜಂಟಿ ನಿರ್ದೇಶಕ ಆರ್.ಗಣೇಶ್ ಅಭಿಪ್ರಾಯಪಟ್ಟಿದ್ದಾರೆ. ದಾವಣಗೆರೆಯಲ್ಲಿಂದು ಎಂ.ಎಸ್.ಎಂ.ಇ ಗಳ ಕಾರ್ಯಕ್ಷಮತೆ ಹೆಚ್ಚಿಸುವುದು ಮತ್ತು ವೇಗಗೊಳಿಸುವ ಯೋಜನೆಯಡಿ ಹಮ್ಮಿಕೊಂಡಿದ್ದ ಒಂದು ದಿನದ ಅರಿವು ಮೂಡಿಸುವ ಕಾರ್ಯಗಾರ ಉದ್ಘಾಟಿಸಿ ಅವರು ಮಾತನಾಡಿದರು ದೇಶ ಇಂದು ವಿಶ್ವದ ನಾಲ್ಕನೇ ದೊಡ್ಡ ಆರ್ಥಿಕ ಶಕ್ತಿಯಾಗಿದ್ದು, ಇದನ್ನು ಮೂರು ಅಥವಾ ಎರಡನೇ ಸ್ಥಾನಕ್ಕೆ ತರಬೇಕಾದರೆ ಎಂಎಸ್ಎಂಇ ಗಳು ವೇಗವಾಗಿ ಅಭಿವೃದ್ಧಿಗೊಳ್ಳಬೇಕು ಮತ್ತು ಹೊಸ ಎಂಎಸ್ಎಂಇ ಗಳು ಸ್ಥಾಪನೆಯಾಗಬೇಕಾದ ಅಗತ್ಯವಿದೆ ಎಂದು ಪ್ರತಿಪಾದಿಸಿದರು.

**ಧ್ವನಿ: ಆರ್.ಗಣೇಶ್ ( ಸಕೆಂಡ್ಸ್)**

**<><*<><>*><>**

ಆಧುನಿಕ ಜೀವನ ಶೈಲಿಯಿಂದ ಮನುಷ್ಯನ ಆಯಸ್ಸು ಕ್ಷೀಣಿಸುತ್ತಿದೆ. ಆರೋಗ್ಯವನ್ನು ಸಮತೋಲನದಿಂದ ಕಾಪಾಡಿಕೊಳ್ಳಲು ಸಾಂಪ್ರದಾಯಿಕ ಪದ್ಧತಿಯ ಸಿರಿಧಾನ್ಯಗಳ ಆಹಾರ ಸೇವನೆಗೆ ಮರಳಬೇಕಿದೆ ಎಂದು ಬೆಂಗಳೂರು ಗ್ರಾಮಾಂತರ ಜಿಲ್ಲಾ ಉಸ್ತುವಾರಿ ಸಚಿವ ಕೆ.ಎಚ್.ಮುನಿಯಪ್ಪ ಸಲಹೆ ನೀಡಿದ್ದಾರೆ. ದೇವನಹಳ್ಳಿ ಕ್ರೀಡಾಂಗಣದಲ್ಲಿ ಕೃಷಿ ಇಲಾಖೆ ವತಿಯಿಂದ ಆಯೋಜಿಸಲಾದ "ಜಿಲ್ಲಾ ಮಟ್ಟದ ಸಿರಿಧಾನ್ಯ ನಡಿಗೆ" ಕಾರ್ಯಕ್ರಮಕ್ಕೆ ಚಾಲನೆ ನೀಡಿ ಮಾತನಾಡಿದ ಅವರು, ದಿನಂಪ್ರತಿ ನವಣೆ, ಸಜ್ಜೆ, ಉದ್ದು, ರಾಗಿ ಮತ್ತು ಜೋಳದಂತ ಸಿರಿಧಾನ್ಯ ಆಹಾರ ಸೇವನೆ ರೂಢಿಸಿಕೊಳ್ಳುವುದು ಅಗತ್ಯ ಎಂದು ಹೇಳಿದರು. ಭಾರತದಲ್ಲಿ ಹಿಂದಿನ ಕಾಲದಲ್ಲಿ

ಪೂರ್ವಜರು ಶೇಕಡಾ ೭೫ ಭಾಗದಷ್ಟು ಕೃಷಿ ಕೆಲಸದಲ್ಲಿ ತೊಡಗಿ, ಸಿರಿಧಾನ್ಯ ಪದಾರ್ಥಗಳ ಗುಣಮಟ್ಟದ ಆಹಾರ ಹಾಗೂ ಹಣ್ಣು-ಹಂಪಲು ಸೇವಿಸುತ್ತಾ, ಗಟ್ಟಿ ಶರೀರದಿಂದ ೧೦೦ ವರ್ಷ ಜೀವಿಸುತ್ತಿದ್ದರು. ಅಂದಿನ ಆಹಾರ ಪದ್ಧತಿಯಿಂದ ಸಮತೋಲನ ಜೀವನ ನಡೆಸಲು ಸಾಧ್ಯವಾಗುತ್ತಿತ್ತು ಎಂದರು. ಕೇಂದ್ರ ಹಾಗೂ ರಾಜ್ಯ ಸರ್ಕಾರ, ಆರೋಗ್ಯ ವೃದ್ಧಿಸುವ ಸಿರಿಧಾನ್ಯಗಳಿಗೆ ಹೆಚ್ಚಿನ ಒತ್ತು ನೀಡಿ, ಸಿರಿಧಾನ್ಯ ಬೆಳೆಯುವ ರೈತರಿಗೆ ಪ್ರೋತ್ಸಾಹಿಸುತ್ತಿದೆ ಎಂದು ಸಚಿವ ಕೆ.ಎಚ್.ಮುನಿಯಪ್ಪ ತಿಳಿಸಿದರು.

<><*<><>*><>

ಕೇಂದ್ರ ಸರ್ಕಾರದ ಪ್ರಧಾನಮಂತ್ರಿ ಶ್ರಮಯೋಗಿ ಮಾನ್-ಧನ್ ಯೋಜನೆಯಡಿ ಅಸಂಘಟಿತ ವಲಯದ ಕಾರ್ಮಿಕರು, ವ್ಯಾಪಾರಿಗಳು ಹಾಗೂ ಸ್ವಯಂ ಉದ್ಯೋಗಿಗಳನ್ನು ನೋಂದಾಯಿಸಲು ಮಾರ್ಚ್ ೧೫ ರವರೆಗೆ 'ವಿಶೇಷ ನೋಂದಣಿಅಭಿಯಾನ' ಹಮ್ಮಿಕೊಳ್ಳಲಾಗಿದೆ. ೧೮ ರಿಂದ ೪೦ ವರ್ಷದೊಳಗಿನ ಅಸಂಘಟಿತ ಕಾರ್ಮಿಕರು ಈ ಯೋಜನೆಯಡಿ ಹೆಸರು ನೋಂದಾಯಿಸಬಹುದಾಗಿದೆ. ವಯಸ್ಸಿಗೆ ಅನುಗುಣವಾಗಿ ಮಾಸಿಕವಾಗಿ ೫೫ ರೂಪಾಯಿಗಳಿಂದ ೨೦೦ ರೂಪಾಯಿ ಗಳವರೆಗೆ ವಂತಿಕೆ ಪಾವತಿ ಮಾಡಬೇಕು. ಕೇಂದ್ರ ಸರ್ಕಾರದ ವತಿಯಿಂದ ಅಷ್ಟೇ ವಂತಿಕೆ ಪಾವತಿಸಿ ಬ್ಯಾಂಕ್ ಖಾತೆಯಲ್ಲಿ ಸದರಿ ಮೊತ್ತವನ್ನು ಸಂಗ್ರಹಿಸಲಾಗುತ್ತದೆ. ೬೦ ವರ್ಷ ಪೂರ್ಣಗೊಂಡ ನಂತರ ಮಾಸಿಕ ಮೂರು ಸಾವಿರ ರೂಪಾಯಿ ಪಿಂಚಣಿ ಸೌಲಭ್ಯ ಪಡೆಯಬಹುದಾಗಿದೆ ಎಂದು ಉಡುಪಿ ಉಪವಿಭಾಗದ ಕಾರ್ಮಿಕ ಅಧಿಕಾರಿ ತಿಳಿಸಿದ್ದಾರೆ. ಕೇಂದ್ರ ಸರ್ಕಾರದ ಪ್ರಧಾನಮಂತ್ರಿ ಶ್ರಮಯೋಗಿ ಮಾನ್-ಧನ್ ಯೋಜನೆಯಡಿ ಅಸಂಘಟಿತ ವಲಯದ ಕಾರ್ಮಿಕರು, ವ್ಯಾಪಾರಿಗಳು ಹಾಗೂ ಸ್ವಯಂ ಉದ್ಯೋಗಿಗಳನ್ನು ನೋಂದಾಯಿಸಲು ಮಾರ್ಚ್ ೧೫ ರವರೆಗೆ 'ವಿಶೇಷ ನೋಂದಣಿ ಅಭಿಯಾನ' ಹಮ್ಮಿಕೊಳ್ಳಲಾಗಿದೆ. ೧೮ ರಿಂದ ೪೦ ವರ್ಷದೊಳಗಿನ ಅಸಂಘಟಿತ ಕಾರ್ಮಿಕರು ಈ ಯೋಜನೆಯಡಿ ಹೆಸರು ನೋಂದಾಯಿಸಬಹುದಾಗಿದೆ. ವಯಸ್ಸಿಗೆ ಅನುಗುಣವಾಗಿ ಮಾಸಿಕವಾಗಿ ೫೫ ರೂಪಾಯಿಗಳಿಂದ ೨೦೦ ರೂಪಾಯಿ ಗಳವರೆಗೆ ವಂತಿಕೆ ಪಾವತಿ ಮಾಡಬೇಕು. ಕೇಂದ್ರ ಸರ್ಕಾರದ ವತಿಯಿಂದ ಅಷ್ಟೇ ವಂತಿಕೆ ಪಾವತಿಸಿ ಬ್ಯಾಂಕ್ ಖಾತೆಯಲ್ಲಿ ಸದರಿ ಮೊತ್ತವನ್ನು ಸಂಗ್ರಹಿಸಲಾಗುತ್ತದೆ. ೬೦ ವರ್ಷ ಪೂರ್ಣಗೊಂಡ ನಂತರ ಮಾಸಿಕ ಮೂರು ಸಾವಿರ ರೂಪಾಯಿ ಪಿಂಚಣಿ ಸೌಲಭ್ಯ ಪಡೆಯಬಹುದಾಗಿದೆ ಎಂದು ಉಡುಪಿ ಉಪವಿಭಾಗದ ಕಾರ್ಮಿಕ ಅಧಿಕಾರಿತಿಳಿಸಿದ್ದಾರೆ.

<><*<><>*><>

ಎಸ್ಸೆಸ್ಸೆಲ್ಸಿ ಪರೀಕ್ಷೆಯ ಫಲಿತಾಂಶವನ್ನು ಮತ್ತಷ್ಟು ಉತ್ತಮಪಡಿಸುವ ನಿಟ್ಟಿನಲ್ಲಿ ಪೂರ್ವಭಾವಿ ಪರೀಕ್ಷೆಗಳಿಗೆ ಹೆಚ್ಚಿನ ಮಹತ್ವ ನೀಡಬೇಕು. ವಿಶೇಷವಾಗಿ ಬಾಲಕಿಯರು ಅನುತ್ತೀರ್ಣರಾಗದಂತೆ

ಶಾಲೆಗಳು ಎಚ್ಚರ ವಹಿಸಬೇಕು ಎಂದು ಶಾಲಾ ಶಿಕ್ಷಣ ಇಲಾಖೆಯ ಕಲಬುರಗಿ ವಿಭಾಗದ ಹೆಚ್ಚುವರಿ ಆಯುಕ್ತ ರಾಹುಲ್ ಪಾಂಡೋ ಸೂಚನೆ ನೀಡಿದ್ದಾರೆ. ಯಾದಗಿರಿ ನಗರದ ಜಿಲ್ಲಾಧಿಕಾರಿ ಕಚೇರಿಯಲ್ಲಿ ನಡೆದ ಎಸ್ಸೆಸ್ಸೆಲ್ಸಿ ಪೂರ್ವ ಸಿದ್ಧತಾ ಪರೀಕ್ಷೆ ಫಲಿತಾಂಶ ಪರಿಶೀಲನಾ ಸಭೆಯಲ್ಲಿ ಮಾತನಾಡಿದ ಅವರು, ಬಾಲಕಿಯರು ಎಸ್ಸೆಸ್ಸೆಲ್ಸಿ ತೇರ್ಗಡೆಯಾಗದೆ, ಶಾಲೆಯಿಂದ ಹೊರಗುಳಿದರೆ, ಬಾಲ್ಯ ವಿವಾಹದ ಅಪಾಯ ಎದುರಾಗುವ ಸಾಧ್ಯತೆ ಇದೆ. ಶಿಕ್ಷಣದಿಂದ ದೂರವಾದರೆ, ಅನೇಕ ಅವಕಾಶಗಳನ್ನು ಕಳೆದುಕೊಳ್ಳಬೇಕಾಗುತ್ತದೆ ಎಂದು ಹೇಳಿದ್ದಾರೆ. ಇಲಾಖೆಯಿಂದ ನೀಡಲಾಗಿರುವ ಕಲಿಕೆ ಸುಧಾರಣೆಯ ಟ್ರ್ಯಾಕಿಂಗ್ ಶೀಟ್‌ನಲ್ಲಿನ ಅಂಶಗಳನ್ನು ಕಟ್ಟುನಿಟ್ಟಾಗಿ ಅನುಸರಿಸಬೇಕು. ಪ್ರತಿ ವಾರವೂ ನಿಗದಿತ ಮಾದರಿಯಲ್ಲಿ ಬೋಧನಾ ಚಟುವಟಿಕೆಗಳನ್ನು ಜಾರಿಗೆ ತರಬೇಕು ಎಂದು ಅವರು ನಿರ್ದೇಶಿಸಿದ್ದಾರೆ.

**<><*<> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <>*><>**

**<><*<> ನಮ್ಮ ಮುಂದಿನ ವಾರ್ತಾ ಪ್ರಸಾರ ಸಂಜೆ ೬.೩೦ ಕ್ಕೆ <>*><>**